<u>ಕರ್ನಾಟಕ ಸರ್ಕಾರದ ನಡವಳಿಗಳು</u>

ವಿಷಯ: ರಾಯಚೂರು ಜಿಲ್ಲೆಯ ಮಾನ್ವಿ ಸ್ಥಳೀಯ ಯೋಜನಾ ಪ್ರದೇಶದ ಮಹಾ ಯೋಜನೆಯನ್ನು ಸರ್ಕಾರದ ಅಂತಿಮ ಅನುಮೋದನೆ ನೀಡುವ ಬಗ್ಗೆ.

ಓದಲಾಗಿದೆ: ೧) ಸರ್ಕಾರದ ಆದೇಶ ಸಂಖ್ಯೆ. ನಅಇ 254 ಬೆಮಪ್ರಾ 2006, ದಿನಾಂಕ: 1.7.06.

೨) ಸದಸ್ಯ ಕಾರ್ಯದರ್ಶಿ, ನಗರ ಯೋಜನಾ ಪ್ರಾಧಿಕಾರ, ಮಾನ್ವಿ ಇವರ ಪತ್ರ ಸಂಖ್ಯೆ.ನಯೋಪ್ರಾಮಾ:ಮಾಸ್ಟರ್ ಪ್ಲಾನ್:2006-07:20-22, ದಿನಾಂಕ: 18.4.07.

೩) ನಿರ್ದೇಶಕರು, ನಗರ ಯೋಜನಾ ಇಲಾಖೆ ಇವರ ಏಕ ಕಡತ ಸಂಖ್ಯೆ. ನಯೋ:ಉನಿ(ಯೋವಿ)ಮಾನ್ವಿ.ಮ.ಯೋ:58:2006-07.

<u>ಪ್ರಸ್ತಾವನೆ:</u>

ಮೇಲೆ ಓದಲಾದ (1) ರ ಸರ್ಕಾರದ ಆದೇಶದಲ್ಲಿ, ಮಾನ್ವಿ ಸ್ಥಳೀಯ ಯೋಜನಾ ಪ್ರದೇಶದ ಮಹಾ ಯೋಜನೆಗೆ ತಾತ್ಕಾಲಿಕ ಅನುಮೋದನೆಯನ್ನು ನೀಡಿ ಆದೇಶಿಸಿರುತ್ತದೆ.

ಮೇಲೆ (2) ರ ಪತ್ರದಲ್ಲಿ ಮಾನ್ವಿ ನಗರ ಯೋಜನಾ ಪ್ರಾಧಿಕಾರ ಇವರು ಮಾನ್ವಿ ಸ್ಥಳೀಯ ಯೋಜನಾ ಪ್ರದೇಶದ ಮಹಾ ಯೋಜನೆಗೆ ಸರ್ಕಾರದ ಅಂತಿಮ ಅನುಮೋದನೆಯನ್ನು ನೀಡಲು ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961 ರ ಕಲಂ 13(3) ರನ್ವಯ ಅಂತಿಮ ಅನುಮೋದನೆಗಾಗಿ ಪ್ರಸ್ತಾವನೆಯನ್ನು ಸಲ್ಲಿಸಿದೆ.

ಮೇಲೆ ಓದಲಾದ (3) ರ ಏಕ ಕಡತದಲ್ಲಿ ನಗರ ಯೋಜನಾ ನಿರ್ದೇಶಕರು, ಮಾನ್ವಿ ಪಟ್ಟಣದ ಜನಸಂಖ್ಯೆಯು 2001 ರಲ್ಲಿ 37,939 ಇದ್ದು, 20 ವರ್ಷಗಳ ಯೋಜನಾ ಅವಧಿಗೆ ಅಂದರೆ, 2021 ನೇ ಇಸವಿಗೆ 75,000 ಆಗಬಹುದೆಂದು ಅಂದಾಜಿಸಿ ಮಹಾ ಯೋಜನೆಯನ್ನು ತಯಾರಿಸಲಾಗಿದೆ. ಸ್ಥಳೀಯ ಯೋಜನಾ ಪ್ರದೇಶದ ಒಟ್ಟು 5089.42 ಹೆಕ್ಟೇರ್ ವಿಸ್ತೀರ್ಣದಲ್ಲಿ 880 ಹೆಕ್ಟೇರ್ ಪ್ರದೇಶವನ್ನು ನಗರೀಕರಣ ಎಲ್ಲೆಯೆಂದು ಪ್ರಸ್ತಾಪಿಸಿ, ಯೋಜನೆಯನ್ನು ರೂಪಿಸಲಾಗಿದೆ. ಮಾನ್ವಿ ಪಟ್ಟಣದ ಜನಸಂಖ್ಯೆ, ಸಾಮಾಜಿ ಮತ್ತು ಆರ್ಥಿಕ ಸ್ಥಿತಿಗತಿ, ಹಾಲಿ ಬೆಳವಣಿಗೆಗಳ ಗತಿ, ರಸ್ತೆಗಳ ಹಾಲಿ ಪರಿಚಲನೆ ವ್ಯವಸ್ಥೆಯ ಸಮಸ್ಯೆಗಳನ್ನು ವಿಶ್ಲೇಷಿಸಿ ಯೋಜನಾ ತತ್ವಗಳಿಗನುಗುಣವಾಗಿ ಹಾಗೂ ಮಾಸ್ಟರ್ ಪ್ಲಾನ್ ತಯಾರಿಕೆಯ ಬಗ್ಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಯ ಕಲಂ 9 ರಿಂದ 12 ರವರೆಗೆ ನಿಗಧಿಪಡಿಸಿರುವ ಅಂಶಗಳನ್ನು ಪರಿಗಣಿಸಿ ನಗರದ ಮುಂದಿನ ಬೆಳವಣಿಗೆಗೆ ವಿವಿಧ ಉಪಯೋಗಗಳಿಗೆ ಬೇಕಾಗಬಹುದಾದ ಭೂಮಿಯನ್ನು ಈ ಕೆಳಗಿನಂತೆ ಕಾಯ್ದಿರಿಸಿ ಮಹಾ ಯೋಜನೆಯನ್ನು ತಯಾರಿಸಲಾಗಿದೆ.

ನಗರದ ಯೋಜಿತ ಬೆಳವಣಿಗೆಗಾಗಿ ಪ್ರಸ್ತಾಪಿಸಿರುವ ಒಟ್ಟು 400 ಹೆಕ್ಟೇರ್ ವಿಸ್ತೀರ್ಣದ ಪ್ರದೇಶದಲ್ಲಿ ವಸತಿಗಾಗಿ 465.00 ಹೆಕ್ಟೇರ್ (ಶೇ.52.84), ವಾಣಿಜ್ಯಕ್ಕೆ 39.00 ಹೆಕ್ಟೇರ್ (ಶೇ.4.43), ಕೈಗಾರಿಕೆಗೆ 31.00 ಹೆಕ್ಟೇರ್ (ಶೇ.4.09), ಸಾರ್ವಜನಿಕ: ಅರೆ ಸಾರ್ವಜನಿಕಕ್ಕೆ 66.00 ಹೆಕ್ಟೇರ್ (ಶೇ.7.50), ಉದ್ಯಾನವನ ಮತ್ತು ಬಯಲು ಜಾಗಕ್ಕೆ 85.00 ಹೆಕ್ಟೇರ್ (ಶೇ.9.66), ನಾಗರೀಕ ಸೌಲಭ್ಯಕ್ಕೆ 9.00 ಹೆಕ್ಟೇರ್ (ಶೇ.1.02) ಹಾಗೂ ಸಾರಿಗೆ ಮತ್ತು ಸಂಪರ್ಕಕ್ಕಾಗಿ 180.00 ಹೆಕ್ಟೇರ್ (ಶೇ.20.46) ವಿಸ್ತೀರ್ಣವನ್ನು ನಿಗಧಿಪಡಿಸಲಾಗಿದೆ ಹಾಗೂ ಯೋಜನೆಯನ್ನು ಅನುಷ್ಠಾನಗೊಳಿಸಲು ಅಗತ್ಯವಿರುವ ವಲಯ ನಿಯಮಾವಳಿಗಳನ್ನು ರೂಪಿಸಲಾಗಿದೆ. ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆಯ ಕಲಂ 13(3) ರನ್ವಯ ಸದರಿ ಯೋಜನೆಯನ್ನು ಸರ್ಕಾರದ ಅಂತಿಮ ಅನುಮೋದನೆ ನೀಡಲು ಶಿಫಾರಸ್ಸು ಮಾಡಿ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

ಪ್ರಸ್ತಾವನೆಯನ್ನು ಪರಿಶೀಲಿಸಿ ನಂತರ ಈ ಕೆಳಕಂಡ ಆದೇಶವನ್ನು ಹೊರಡಿಸಲಾಗಿದೆ.

ಸರ್ಕಾರದ ಆದೇಶ ಸಂಖ್ಯೆ. ನಅಇ 106 ಬೆಮಪ್ರಾ 2007, ಬೆಂಗಳೂರು, ದಿನಾಂಕ: 14.5.2007.

ಮೇಲಿನ ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಮಾನ್ವಿ ಸ್ಥಳೀಯ ಯೋಜನಾ ಪ್ರದೇಶದ ಮಹಾ ಯೋಜನೆಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961 ರ ಕಲಂ 13(3) ರನ್ವಯ ಸರ್ಕಾರದ ಅಂತಿಮ ಅನುಮೋದನೆಯನ್ನು ನೀಡಲಾಗಿದೆ.

ಮಹಾ ಯೋಜನೆಗೆ ತಾತ್ಕಾಲಿಕ ಅನುಮೋದನೆ ನೀಡಿದ ಗುರುತಾಗಿ ವರದಿ ಮತ್ತು ನಕ್ಷೆಗಳ ಮೇಲೆ ಸರ್ಕಾರದ ಮುದ್ರೆಯನ್ನು ಹಾಕಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಬಿ.ಜಿ.ವಾಲಿ)
ಸರ್ಕಾರದ ಅಧೀನ ಕಾರ್ಯದರ್ಶಿ,
ನಗರಾಭಿವೃದ್ಧಿ ಇಲಾಖೆ.

ಇವರಿಗೆ:

೧. ನಿರ್ದೇಶಕರು, ನಗರ ಯೋಜನಾ ಇಲಾಖೆ, ಬೆಂಗಳೂರು.
೨. ಸದಸ್ಯ ಕಾರ್ಯದರ್ಶಿ, ನಗರ ಯೋಜನಾ ಪ್ರಾಧಿಕಾರ, ಮಾನ್ವಿ.
೩. ಸಹಾಯಕ ನಿರ್ದೇಶಕರು, ನಗರ ಯೋಜನಾ ಇಲಾಖೆ, ರಾಯಚೂರು.
೪. ಮಾನ್ಯ ಮುಖ್ಯಮಂತ್ರಿಯವರ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವಿಧಾನಸೌಧ.
೫. ಕರ್ನಾಟಕ ರಾಜ್ಯಪತ್ರ.
೬. ಸರ್ಕಾರದ ಕಾರ್ಯದರ್ಶಿಗಳ/ಜಂಟಿ ಕಾರ್ಯದರ್ಶಿಗಳ ಆಪ್ತ ಸಹಾಯಕರು, ನಗರಾಭಿವೃದ್ಧಿ ಇಲಾಖೆ
೭. ಶಾಖಾ ರಕ್ಷಾ ಕಡತ: ಹೆಚ್ಚುವರಿ ಪ್ರತಿಗಳು.